620 (517) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆರೋಗ್ಯ ಸುಧಾರಣೆ ಯೋಜನೆಯಡಿ ಸರ್ಕಾರ ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳು ಯಾವುವು?

ಆ) ರಾಜ್ಯದಲ್ಲಿನ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಯೋಜನೆ ರೂಪಿಸಿದೆಯೇ? ಹಾಗಿದ್ದಲ್ಲಿ ಅಂತಹ ಆಸ್ಪತ್ರೆಗಳೆಷ್ಟು?

ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮೇಲ್ದರ್ಜೆಗೇರಿಸಲಾಗಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಈ) ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಪೂರೈಕೆಯಲ್ಲಿ ಉಂಟಾಗಿರುವ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೆಷ್ಟು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿ ಆರೋಗ್ಯ ಸುಧಾರಣೆ ಯೋಜನೆಯಡಿಯಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದೆ ರಾಜ್ಯದಲ್ಲಿರುವ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಟ್ಟಡಗಳಿರುವಂತೆ ಯೋಜಿಸಲಾಗಿದೆ ಕಟ್ಟಡಗಳಿಲ್ಲದ 100 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಕೆ ಹೆಚ್ ಎಸ್ ಆರ್ ಡಿ ಪಿ ಯೋಜನೆಯಡಿಯಲ್ಲಿ 2007–08ನೇ ಸಾಲಿನಲ್ಲಿ 38 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಟ್ಟಡಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ಹಾಗೂ ಆರ್ ಐ ಡಿ ಎಫ್ 12ರ ಯೋಜನೆಯಡಿಯಲ್ಲಿ 12 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ

ಡಾ ನಂಜುಂಡಪ್ಪ ವರದಿಯ ಪ್ರಕಾರ ಅತ್ಯಂತ ಹಿಂದುಳಿದ ತಾಲ್ಲೂಕುಗಳಲ್ಲಿನ 45 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ 10 ಕೋಟಿಗಳಲ್ಲಿ ಅತ್ಯಾವಶ್ಯಕ ಉಪಕರಣಗಳನ್ನು ಒದಗಿಸಲು ಕ್ರಮ ಜರುಗಿಸಲಾಗಿದೆ ಹಾಗೂ ಇದೇ ತಾಲ್ಲೂಕುಗಳಲ್ಲಿನ 399 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 24 ಗಂಟೆಗಳ ನರ್ಸಿಂಗ್ ಸೇವೆಯ ವ್ಯವಸ್ಥೆಯನ್ನು ಒದಗಿಸಲಾಗಿದೆ ಈ ಕೇಂದ್ರಗಳಿಗೆ ಹೆಚ್ಚುವರಿ ವೈದ್ಯರನ್ನು ನೇಮಸಲಾಗಿದೆ ಎನ್ ಆರ್ ಹೆಚ್ ಎಂ ಅಡಿಯಲ್ಲಿ ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ 75000 ರೂ ಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಿಗೆ 1 ಲಕ್ಷ ರೂ ಗಳನ್ನು ಪ್ರತಿ ಉಪಕೇಂದ್ರಕ್ಕೆ 10 ಸಾವಿರದಂತೆ ಬಿಡುಗಡೆ ಮಾಡಲಾಗಿದೆ 'ಸಿ' ವರ್ಗದ

ಜಿಲ್ಲೆಗಳಲ್ಲಿ 100 ಹೆಚ್ಚುವರಿ ವೈದ್ಯರು ಹಾಗೂ 160 ಶುಶ್ರೂಷಕಿಯನ್ನು ನೇಮಿಸಲಾಗಿದೆ ಖಾಲಿ ಇರುವ ಸಿಬ್ಬಂದಿಗಳ ಕೊರತೆ ನೀಗಿಸಲು ಖಾಯಂ ಆಗಿ 500 ವೈದ್ಯಾಧಿಕಾರಿಗಳನ್ನು 2 ಹಂತಗಳಲ್ಲಿ ವಿಶೇಷ ನೇಮಕಾತಿ ನಿಯಮಗಳಡಿ ಭರ್ತಿ ಮಾಡಲು ಅನುಮತಿ ನೀಡಿದ್ದು, ಇದರಲ್ಲಿ ಮೊದಲನೇ ಹಂತವಾಗಿ 250 ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಹಾಗೆಯೇ 2807 ಖಾಲಿ ಇರುವ ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ಭರ್ತಿ ಮಾಡುವ ಸಲುವಾಗಿ ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ ಅರ್ಜಿ ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ

ಪ್ರತಿ ಆಸ್ಪತ್ರೆಗೂ ಹಿಂದೆ ಇದ್ದ ಔಷಧಿ ಪೂರೈಕೆಯ ಎರಡರಿಂದ ಮೂರರಷ್ಟು ಹೆಚ್ಚಿಸಲಾಗಿದೆ ಎಲ್ಲಾ ತಾಲ್ಲೂಕು ಆಸ್ಪತ್ರೆಗಳನ್ನು ಸಹ ಮೇಲ್ದರ್ಜೆಗೇರಿಸಲಾಗಿದೆ

ಆ) ರಾಜ್ಯದಲ್ಲಿನ ಎಲ್ಲಾ ತಾಲ್ಲೂಕು ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಉದ್ದೇಶವಿದ್ದು, ಪ್ರಸಕ್ತ ಸಾಲಿನಲ್ಲಿ 63 ತಾಲ್ಲೂಕು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ ಇದರಿಂದ ಎಲ್ಲಾ ತಾಲ್ಲೂಕುಗಳ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ ಉಳಿದವು ಜಿಲ್ಲಾ ಆಸ್ಪತ್ರೆಗಳಾಗಿರುತ್ತವೆ

ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಎರಡು ಜಿಲ್ಲೆಗಳಲ್ಲಿ ಎಲ್ಲಾ ತಾಲ್ಲೂಕು ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ

ಈ) ಹೊರಗುತ್ತಿಗೆಯಲ್ಲಿರುವ ಔಷಧಿಗಳನ್ನು ಸರ್ಕಾರಿ ಆಸ್ಪತ್ರೆಗಳ ಬೇಡಿಕೆಯಂತೆ ಖರೀದಿಸಿ ಪೂರೈಸಲಾಗುತ್ತಿದೆ ಈ ಔಷಧಿ ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಇರುವುದಿಲ್ಲ

ಸರ್ಕಾರಿ ಆಸ್ಪತ್ರೆಗಳ ಬಳಕೆಗನುಗುಣವಾಗಿ ಇನ್ನೂ ಹೆಚ್ಚಿನ ಔಷಧಿ ರಸಾಯನಿಕ ಮತ್ತು ಇತರೆ ವಸ್ತುಗಳ ಅಗತ್ಯತೆ ಇದ್ದುದನ್ನು ಮನಗಂಡು ರಾಜ್ಯ ಧೆರಪಿಟಿಕ್ ಸಮಿತಿಯ ಶಿಫಾರಸ್ಸಿನಂತೆ 2006 ನೇ ಸಾಲಿನಲ್ಲಿ ಹೊಸದಾಗಿ ಟೆಂಡರ್ ಕರೆದು 317 ವಿವಿಧ ಔಷಧಿಗಳಿಗೆ ಹಾಗೂ 86 ಸೂಚರ್ ಸಾಮಾಗ್ರಿಗಳಿಗೆ ಹೊಸದಾಗಿ ದರಗುತ್ತಿಗೆಗಳನ್ನು ನಿಗದಿ ಮಾಡಲಾಗಿದೆ

ಕೆಲವು ಹಂತದ ಸರ್ಕಾರಿ ಆಸ್ಪತ್ರೆಗಳಿಗೆ ಈ ಹಿಂದೆ ನಿಗದಿಗೊಳಿಸಲಾಗಿದ್ದ ಅನುದಾನ ಸಾಕಾಗುತ್ತಿಲ್ಲವೆಂದು ಕಂಡುಬಂದ ಕಾರಣ ಉನ್ನತ ಸಮಿತಿಯ ಶಿಫಾರಸ್ಸಿನಂತೆ 2006–07ನೇ ಸಾಲಿಗೆ ಅನುದಾನವನ್ನು ಅವುಗಳ ಬಳಕೆ ತಕ್ಕಂತೆ ಹೆಚ್ಚಿಸಿಕೊಳ್ಳಲಾಗಿದೆ